**ದಿನಾಂಕ: 13.06.2014 ರಂದು ಪೂರ್ವಾಹ್ನ 9.30 ಗಂಟೆಗೆ ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು, ಕರ್ನಾಟಕ ಸರ್ಕಾರ ಹಾಗೂ ಅಧ್ಯಕ್ಷರು, ಆಡಳಿತ ಮಂಡಳಿ, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ರವರ ಅಧ್ಯಕ್ಷತೆಯಲ್ಲಿ ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರ ಕೊಠಡಿ, ವಿಧಾನ ಸೌಧ, ಬೆಂಗಳೂರು ಇಲ್ಲಿ ನಡೆದ ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಯ 21ನೇ ಆಡಳಿತ ಮಂಡಳಿ ಸಭೆಯ ನಡವಳಿಗಳು.**

**ಸಭೆಯಲ್ಲಿ ಉಪಸ್ಥಿತರು :**

1. **ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು,** ಕರ್ನಾಟಕ ಸರ್ಕಾರ, ವಿಧಾನ ಸೌಧ, ಬೆಂಗಳೂರು ಹಾಗೂ ಅಧ್ಯಕ್ಷರು, ಆಡಳಿತ ಮಂಡಳಿ, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಮೈಸೂರು :: ಅಧ್ಯಕ್ಷರು
2. **ಸರ್ಕಾರದ ಕಾರ್ಯದರ್ಶಿಗಳು** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, (ವೈದ್ಯಕೀಯ ಶಿಕ್ಷಣ), ವಿಕಾಸ ಸೌಧ :: ಉಪಾಧ್ಯಕ್ಷರು
3. **ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು** ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ವಿಕಾಸ ಸೌಧ, ಬೆಂಗಳೂರು :: ಸದಸ್ಯರು
4. **ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು** ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು :: ಸದಸ್ಯರು
5. **ನಿರ್ದೇಶಕರು,** ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಬೆಂಗಳೂರು :: ಸದಸ್ಯರು
6. **ನಿರ್ದೇಶಕರು ಮತ್ತು ಡೀನ್,** ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಮೈಸೂರು ಹಾಗೂ ಸದಸ್ಯ ಕಾರ್ಯದರ್ಶಿಗಳು, ಆಡಳಿತ ಮಂಡಳಿ :: ಸದಸ್ಯ ಕಾರ್ಯದರ್ಶಿ

ನಿರ್ದೇಶಕರು ಮತ್ತು ಡೀನ್, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಮೈಸೂರು ಇವರು ಸಭೆಯಲ್ಲಿ ಉಪಸ್ಥಿತರಿದ್ದ ಎಲ್ಲಾ ಸದಸ್ಯರನ್ನು ಸ್ವಾಗತಿಸಿದರು. ಸಭೆಯ ಅಧ್ಯಕ್ಷತೆಯನ್ನು ವಹಿಸಿಕೊಳ್ಳುವಂತೆ ಸನ್ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಹಾಗೂ ಅಧ್ಯಕ್ಷರು, ಆಡಳಿತ ಮಂಡಳಿ, ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ ರವರನ್ನು ಕೋರಲಾಗಿ, ಮಾನ್ಯ ಸಚಿವರು ಅಧ್ಯಕ್ಷತೆಯನ್ನು ವಹಿಸಿದರು.

| ವಿಷಯ ಸೂಚಿ ಸಂಖ್ಯೆ | ವಿಷಯ | ಸಭೆಯ ತೀರ್ಮಾನ |
|---|---|---|
| 1 | ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡುವುದು. | ದಿನಾಂಕ: 28–04–2014 ರಂದು ನಡೆದ ಸಂಸ್ಥೆಯ 20ನೇ ಆಡಳಿತ ಮಂಡಳಿ ಸಭೆಯ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು. |
| 2 | ಹಿಂದಿನ ಸಭಾ ನಡವಳಿಗೆ ಕೈಗೊಳ್ಳಲಾಗಿರುವ ಅನುಪಾಲನಾ ವರದಿ | ದಿನಾಂಕ: 28–04–2014 ರಂದು ನಡೆದ ಸಂಸ್ಥೆಯ 20ನೇ ಆಡಳಿತ ಮಂಡಳಿ ಸಭೆಯ ನಡವಳಿಗೆ ಕೈಗೊಳ್ಳಲಾಗಿರುವ ಕ್ರಮಗಳ ಅನುಪಾಲನಾ ವರದಿಯನ್ನು ನಿರ್ದೇಶಕರು ಮತ್ತು ಡೀನ್ ರವರು ಓದಿ ಸಭೆಗೆ ತಿಳಿಸಿದರು.<br><br>3) ಖಾಲಿ ಇರುವ ಅತ್ಯಾವಶ್ಯಕ ಗ್ರೂಪ್–ಸಿ ಮತ್ತು ಗ್ರೂಪ್–ಡಿ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ ಚರ್ಚಿಸುತ್ತಾ, ನಿರ್ದೇಶಕರು ಮತ್ತು ಡೀನ್ ರವರು ತಾಂತ್ರಿಕ ಹುದ್ದೆಗಳನ್ನು ಗುತ್ತಿಗೆ ಆಧಾರದಲ್ಲಿ 11 ತಿಂಗಳ ಅವಧಿಗೆ ನೇಮಕಾತಿ ಮಾಡಿಕೊಂಡಿರುವ ಬಗ್ಗೆ ಸಭೆಯ ಗಮನಕ್ಕೆ ತಂದರು.<br><br>ಮಾನ್ಯ ಅಧ್ಯಕ್ಷರು ಮಂಜೂರಾಗಿ, ಖಾಲಿ ಇರುವ ಗ್ರೂಪ್–ಸಿ ಮತ್ತು ಗ್ರೂಪ್–ಡಿ ಹುದ್ದೆಗಳ ಬಗ್ಗೆ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಸೂಚಿಸಿದರು. ಮಾನ್ಯ ಉಪಾಧ್ಯಕ್ಷರು ಬೆಂಗಳೂರು ವೈದ್ಯಕೀಯ ಕಾಲೇಜಿನಲ್ಲಿ ಅಳವಡಿಸಿಕೊಂಡಿರುವ ವೃಂದ ಮತ್ತು ನೇಮಕಾತಿ ನಿಯಮವನ್ನು ಪಡೆದು ಅದರಲ್ಲಿ ಏನಾದರೂ ಬದಲಾವಣೆ ಅವಶ್ಯವಿದ್ದಲ್ಲಿ ಮಾಡಿ ಪ್ರಸ್ತಾವನೆ ಸಲ್ಲಿಸುವಂತೆ ಸೂಚಿಸಿದರು. ಮುಂದುವರೆದು 1962ರ ವೃಂದ ಮತ್ತು ನೇಮಕಾತಿ ನಿಯಮಗಳು ಈಗಾಗಲೇ ಜಾರಿಯಲ್ಲಿದ್ದು ಅದರಲ್ಲಿ ಬದಲಾವಣೆ ಮಾಡಿ ಮೈಸೂರು ವೈದ್ಯಕೀಯ ಕಾಲೇಜು ಮತ್ತು ಸಂಶೋಧನಾ ಸಂಸ್ಥೆಗೆ ಸಂಬಂಧಿಸಿದಂತೆ ಗ್ರೂಪ್–ಸಿ ಮತ್ತು ಗ್ರೂಪ್–ಡಿ ವೃಂದ ಮತ್ತು ನೇಮಕಾತಿ ನಿಯಮವನ್ನು ರೂಪಿಸಿ ಕಡತವನ್ನು ಸಲ್ಲಿಸುವಂತೆ ನಿರ್ದೇಶಕರು ಮತ್ತು ಡೀನ್ ರವರಿಗೆ ಸೂಚಿಸಿದರು.<br><br>7) ವಿದ್ಯಾರ್ಥಿನಿಲಯದ ಅಡುಗೆ ಕೆಲಸದವರಿಗೆ ಸಂಬಂಧಿಸಿದಂತೆ ನ್ಯಾಯಾಲಯ ಪ್ರಕರಣದ ಬಗ್ಗೆ ಚರ್ಚಿಸಲಾಯಿತು. ಈ ಹಿಂದಿನ ಆಡಳಿತ ಮಂಡಳಿಯಲ್ಲಿ ಸೂಚಿಸಿರುವಂತೆ ಸರ್ವೋಚ್ಚ ನ್ಯಾಯಾಲಯದ ವೆಚ್ಚದ ಬಗ್ಗೆ ಈ ಸಂಸ್ಥೆಯಿಂದ ನೇಮಕ ಮಾಡಿಕೊಂಡಿರುವ ವಕೀಲರಾದ ಶ್ರೀ ಟಿ.ಶೇಷಗಿರಿರಾವ್ ಇವರಿಗೆ ಪತ್ರ ಬರೆದು ಅಡುಗೆ ಕೆಲಸಗಾರರಿಂದ ಸರ್ವೋಚ್ಚ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಲು ವೆಚ್ಚವು ಎಷ್ಟಾಗುತ್ತದೆ ಎಂಬ ಬಗ್ಗೆ ವಿವರವನ್ನು ಕೋರಲಾಗಿದ್ದು ಸದರಿ ವಕೀಲರು ಕೇಸನ್ನು ದಾಖಲಿಸಲು ಅಂದಾಜು ರೂ. 75,000/– ಗಳು ವೆಚ್ಚವಾಗುವುದಾಗಿ ತಿಳಿಸಿರುತ್ತಾರೆ ಮತ್ತು ಪ್ರತಿ ಹಿಯರಿಂಗ್‌ಗೆ ಪ್ರತ್ಯೇಕ |